ಡಾ|| ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಹೌದು, ಈ ಆಸ್ಪತ್ರೆಗೆ ಕೇವಲ2 ನೇರ ಸಂಪರ್ಕಗಳಿದ್ದು1 ಸಂಪರ್ಕ ರಸ್ತೆಯು ರಾಷ್ಟ್ರೀಯ ಮಾನಸಿಕ ನರ ವಿಜ್ಞಾನ ಸಂಸ್ಥೆಯ ಮೂಲಕವಾಗಿ ಮತ್ತೊಂದು ರಸ್ತೆ ಪಶ್ಚಿಮ ಭಾಗಕ್ಕೆ 80 ಅಡಿ ರಸ್ತೆಗೆ ಸಂಪರ್ಕವಿರುತ್ತದೆ. ರಾಷ್ಟ್ರೀಯ ಮಾನಸಿಕ ಮತ್ತು ನರ ವಿಜ್ಞಾನ ಸಂಸ್ಥೆಯ ಪ್ರಾಧಿಕಾರವು ಈ ಆಸ್ಪತ್ರೆಯ ವಾಹನಗಳನ್ನು ಹಾದು ಹೋಗಲು ಅನುಮತಿ ನೀಡಲು ನಿರಾಕರಿಸಿರುತ್ತಾರೆ. ಮತ್ತೊಂದು 30 ಅಡಿ ರಸ್ತೆಯು ನೇರವಾಗಿದ್ದು ಅಂಬ್ಯುಲೆನ್ಸ್ ವಾಹನಗಳನ್ನು ಶೀಘ್ರವಾಗಿ ತಿರುವಲು ಮತ್ತು ನಡೆಸಲು ಅನಾನುಕೂಲವಾಗಿರುತ್ತದೆ.

ಆ) ಈ ಸಂಜಯ್‌ಗಾಂಧಿ ಅಪಘಾತ ಆಸ್ಪತ್ರೆಗೆ ಹೋಗುವ ರಸ್ತೆಯನ್ನು ಸರಿಪಡಿಸಲು ಸರ್ಕಾರವು ಕ್ರಮಕೈಗೊಳ್ಳುತ್ತಿದೆ.

ಕೊಳಚೆ ಪ್ರದೇಶದಿಂದ ರೋಗಿಗಳಿಗೆ ತೊಂದರೆ.

1602 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರಿನ ಎನ್‌ಡಿಎಸ್ ಸ್ಯಾನಿಟೋರಿಯಂನ ಆವರಣದ ಮಧ್ಯದಲ್ಲಿ ಒಂದು ಕೊಳಚೆ ಪ್ರದೇಶ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಇದರಿಂದ ರೋಗಿಗಳಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೇ?

ಇ) ಈ ಸ್ಲಂನ್ನು ಬೇರೆ ಕಡೆಗೆ ಸ್ಥಳಾಂತರಿಸಲು ಸರ್ಕಾರದ ಕೈಗೊಳ್ಳಲಿರುವ ಕ್ರಮಗಳೇನು?

ಡಾ|| ಎಂ. ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಹೌದು.

ಆ) ಹೌದು.

ಇ) ಈ ಸ್ಲಂನ್ನು ಸ್ಥಳಾಂತರಿಸಲು ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು ನಗರ ಜಿಲ್ಲಾಧಿಕಾರಿಗಳು ಹಾಗೂ ಬೆಂಗಳೂರು ಉತ್ತರ ತಾಲ್ಲೂಕಿನ ತಹಸೀಲ್ದಾರರೊಂದಿಗೆ ವ್ಯವಹರಿಸಲಾಗುತ್ತಿದೆ. ಹಾಗೂ ಅವರಿಗೆ ಸೂಕ್ತ ಸ್ಥಳದಲ್ಲಿ ಪುನರ್ವಸತಿ ಕಲ್ಪಿಸಲು ಸೂಚಿಸಲಾಗಿದೆ.

ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕೆಂಪೇಗೌಡ ಅಧ್ಯಯನ ಪೀಠ ಸ್ಥಾಪನೆ.

1603 - ಶ್ರೀ ರಾಮಲಿಂಗಾರೆಡ್ಡಿ (ಜಯನಗರ) : ಮಾನ್ಯ ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕೆಂಪೇಗೌಡರ ಪೀಠವನ್ನು ಸ್ಥಾಪಿಸಲು ಸರ್ಕಾರದವರು ಪರಿಶೀಲಿಸುವರೆ?

ಆ) ಹಾಗಿಲ್ಲದಿದ್ದಲ್ಲಿ, ಸರ್ಕಾರ ಈ ಪೀಠವನ್ನು ಸ್ಥಾಪಿಸಲು ಯಾವ ಕ್ರಮ ಕೈಗೊಳ್ಳುತ್ತದೆ?